4. ಸಭೆಯ ಮುಂದಿಡಲಾದ ಕಾಗದ ಪತ್ರಗಳು.

ಶ್ರೀ ಹೆಚ್.ಡಿ. ಕುಮಾರಸ್ವಾಮಿ (ಮುಖ್ಯಮಂತ್ರಿಯವರು): ಮಾನ್ಯ ಅಧ್ಯಕ್ಷರೆ, "1978ರ ಕರ್ನಾಟಕ ನಾಗರೀಕ ಸೇವಾ ನಿಯಮ 8(3)ರ ಪ್ರಕರಣದ ಮೇರೆಗೆ ಕರ್ನಾಟಕ ಸರ್ಕಾರ ಸಚಿವಾಲಯ ಸೇವೆಗಳು (ನೇಮಕಾತಿ) ನಿಯಮಗಳು–2006ರಂದು ಅನುಸೂಚಿಗೆ ತಿದ್ದುಪಡಿ ಮಾಡಿ ದಿನಾಂಕ 24–2–06 ಹೊರಡಿಸಲಾದ ಡಿಪಿಎಆರ್:05ಎಸ್ಆರ್‌ಡಿ: 2005ನೇ ಸಂಖ್ಯೆಯ ಅಧಿಸೂಚನೆಯನ್ನು ಸಭೆಯ ಮುಂದೆ ಮಂಡಿಸುತ್ತೇನೆ."

ಅಧ್ಯಕ್ಷರು: ಮಂಡಿಸಲಾಯಿತು.

ಶ್ರೀ ಕೆ.ಎಸ್. ಈಶ್ವರಪ್ಪ (ಜಲಸಂಪನ್ಮೂಲ ಸಚಿವರು)(ಮಾನ್ಯ ಯಡಿಯೂರಪ್ಪನವರು, ಮಾನ್ಯ ಉಪ ಮುಖ್ಯಮಂತ್ರಿಯವರು ಹಾಗೂ ಹಣಕಾಸು ಸಚಿವರ ಪರವಾಗಿ): ಮಾನ್ಯ ಅಧ್ಯಕ್ಷರೆ, 1978ರ ಕರ್ನಾಟಕ ನಾಗರೀಕ ಸೇವಾ ನಿಯಮ 8(3)ರ ಪ್ರಕರಣದ ಮೇರೆಗೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಯ ನಿಯಮ 222 ಮತ್ತು 291ಕ್ಕೆ ತಿದ್ದುಪಡಿ ಮಾಡಿ ದಿನಾಂಕ 28.02.2006ರಂದು ಹೊರಡಿಸಲಾದ ಎಫ್.ಡಿ:6:ಎಸ್ಆರ್ಎ:2003ನೇ ಸಂಖ್ಯೆಯ ಅಧಿಸೂಚನೆಯನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು: ಮಂಡಿಸಲಾಯಿತು.

ಶ್ರೀ ಕೆ.ಎಸ್. ಈಶ್ವರಪ್ಪ (ಜಲಸಂಪನ್ಮೂಲ ಸಚಿವರು)(ಶ್ರೀ ಬಿ.ಎಸ್. ಹೊರಟ್ಟಿ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಪರವಾಗಿ): ಮಾನ್ಯ ಅಧ್ಯಕ್ಷರೆ, 1983ರ ಕರ್ನಾಟಕ ಶಿಕ್ಷಣ ಅಧಿನಿಯಮ (1995ರ ಕರ್ನಾಟಕ ಅಧಿನಿಯಮ–1) 145 (4)ರ ಪ್ರಕರಣದ ಮೇರೆಗೆ:1998ರ ಕರ್ನಾಟಕ ಶಿಕ್ಷಣ ಸಂಸ್ಥೆಗಳು (ಮೇಲ್ಮನವಿ ಪ್ರಾಧಿಕಾರ) ನಿಯಮಗಳ ನಿಯಮ 3 ರಲ್ಲಿ ಉರ್ದು ಮತ್ತು ಇತರ ಅಲ್ಪಸಂಖ್ಯಾತ ಭಾಷಾ ಶಾಲೆಗಳ ನಿರ್ದೇಶನಾಲಯಕ್ಕೆ ಅಧಿಕಾರ ಪ್ರತ್ಯಾಯೋಜನೆಯ ಬಗ್ಗೆ ತಿದ್ದುಪಡಿ ಮಾಡಿ ದಿನಾಂಕ 22.10.2005 ರಂದು ಹೊರಡಿಸಲಾದ ಇಡಿ:11:ಎಂಪಿಎಸ್:2004ನೇ ಸಂಖ್ಯೆಯ ಅಧಿಸೂಚನೆಯನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು: ಮಂಡಿಸಲಾಯಿತು.

5. ವರದಿಯನ್ನೊಪ್ಪಿಸುವುದು.

ವಿಷಯ: ಸಾರ್ವಜನಿಕ ಉದ್ಯಮಗಳ ಸಮಿತಿಯ 112ನೇ ವರದಿಯ ಮಂಡನೆ

ಶ್ರೀ ಕೆ. ಜಯಪ್ರಕಾಶ್ ಹೆಗ್ಡೆ(ಅಧ್ಯಕ್ಷರು, ಸಾರ್ವಜನಿಕ ಉದ್ಯಮಗಳ ಸಮಿತಿ): ಮಾನ್ಯ ಅಧ್ಯಕ್ಷರೆ, ಕರ್ನಾಟಕ ವಿಧಾನ ಮಂಡಲದ ಸಾರ್ವಜನಿಕ ಉದ್ಯಮಗಳ ಸಮಿತಿಯ ಅಧ್ಯಕ್ಷನಾಗಿ ನಾನು ಸಮಿತಿಯ 112ನೇ ವರದಿಯನ್ನು ಸಭೆಗೆ ಒಪ್ಪಿಸುತ್ತೇನೆ.

ಅಧ್ಯಕ್ಷರು: ವರದಿಯನ್ನೊಪ್ಪಿಸಲಾಯಿತು.